# ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಹದಿನಾರನೇ ಅಧಿವೇಶನ)

## ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 06ನೇ ಫೆಬ್ರವರಿ, 2018
(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

## 1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೊದಲನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೊದಲನೇ ಪಟ್ಟಿ

## 2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**I. ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಗಳು) ಅವರು:**

ಭಾರತ ಸಂವಿಧಾನದ 151 (2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ 2016-17ನೇ ಸಾಲಿನ ಧನವಿನಿಯೋಗ ಲೆಕ್ಕಗಳು ಮತ್ತು ಹಣಕಾಸು ಲೆಕ್ಕಗಳನ್ನು (ಸಂಪುಟ 1 ಮತ್ತು 2) ಸಭೆಯ ಮುಂದಿಡುವುದು.

**II.** ಸದಸ್ಯರಿಗೆ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಮೊದಲನೇ ಹಾಗೂ ಎರಡನೇ ಪಟ್ಟಿಯ ರೀತ್ಯ.

## 3. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2018ರ ಫೆಬ್ರವರಿ 05 ರಂದು ವಿಧಾನ ಮಂಡಲದ ಉಭಯ ಸದನಗಳ ಸದಸ್ಯರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ಮಾನ್ಯ ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ."
ಎಂದು ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ ಅವರು ಸೂಚಿಸುವುದು.

ಶ್ರೀ ಎನ್. ಎ. ಹ್ಯಾರಿಸ್ ಅವರು ಅನುಮೋದಿಸುವುದು.

## 4. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಯಶವಂತರಾಯಗೌಡ ವಿಠ್ಠಲಗೌಡ ಪಾಟೀಲ ಇವರು** – ಟೋಕರೆ ಕೋಳಿ ಜನಾಂಗಕ್ಕೆ (ಎಸ್.ಟಿ) ಜಾತಿ ಪ್ರಮಾಣ ಪತ್ರವನ್ನು ನೀಡುವಂತೆ ಸರ್ಕಾರ ಕಾಲ ಕಾಲಕ್ಕೆ ಸುತ್ತೋಲೆ ಹೊರಡಿಸಿದ್ದರೂ ವಿಜಯಪುರ ಜಿಲ್ಲೆಯಲ್ಲಿ ಜಾತಿ ಪ್ರಮಾಣ ಪತ್ರವನ್ನು ನೀಡದೇ ಇರುವುದರಿಂದ ಆ ಜನಾಂಗದ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

2) **ಶ್ರೀ ಕೆ.ಜಿ. ಬೋಪಯ್ಯ ಇವರು** – ವಿರಾಜಪೇಟೆ ತಾಲ್ಲೂಕಿನಲ್ಲಿ ಕಾಡಾನೆಗಳ ಹಾವಳಿ ತಪ್ಪಿಸಲು ರೈಲ್ವೆ ಕಂಬಿಗಳನ್ನು ಅಳವಡಿಸಿ ಬೇಲಿ ನಿರ್ಮಿಸಲು ಮಂಜೂರಾಗಿರುವ ಕಾಮಗಾರಿಯನ್ನು ತ್ವರಿತವಾಗಿ ಕೈಗೆತ್ತಿಕೊಳ್ಳುವ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

3) **ಶ್ರೀ ಎನ್.ಎ. ಹ್ಯಾರಿಸ್ ಇವರು** – ರಾಜ್ಯದಲ್ಲಿ ಅಗ್ರಿಗೋಲ್ಡ್ ಸಮೂಹ ಸಂಸ್ಥೆಗಳು ಗ್ರಾಹಕರು ಹಾಗೂ ಏಜೆಂಟರುಗಳಿಗೆ ಠೇವಣಿ ಹಣವನ್ನು ಹಿಂದಿರುಗಿಸದೇ ವಂಚಿಸಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

4) **ಶ್ರೀ ವಿ. ಸುನಿಲ್ ಕುಮಾರ್ ಇವರು** – ಉಡುಪಿ ಜಿಲ್ಲೆಯ ಹೆಬ್ರಿಯನ್ನು ತಾಲ್ಲೂಕನ್ನಾಗಿ ಘೋಷಣೆ ಮಾಡಿದ್ದರೂ ತಾಲ್ಲೂಕು ಕಛೇರಿಯನ್ನು ಪ್ರಾರಂಭಿಸದೇ ಇರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

**ಎಸ್. ಮೂರ್ತಿ**
ಕಾರ್ಯದರ್ಶಿ(I/c)

---

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ಅಂತರ್ಜಾಲದ ಈ ವಿಳಾಸದಲ್ಲಿ ಪಡೆದುಕೊಳ್ಳಬಹುದು
***http://kla.kar.nic.in/assembly/lob/lob.htm***